**ಕರ್ನಾಟಕ ಸರ್ಕಾರ**

ಸಂಖ್ಯೆ: ಸಕನಿ/ಸಿಬ್ಬಂದಿ-8 /ಸಿಆರ್-58/2017-18

ಸಮಾಜ ಕಲ್ಯಾಣ ಆಯುಕ್ತರ ಕಛೇರಿ,
5ನೇ ಮಹಡಿ, ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ 30-11-2017

**ಅಧಿಕೃತ ಜ್ಞಾಪನಾ**

ವಿಷಯ:- ಮಾನ್ಯ ಸರ್ವೋಚ್ಛ ನ್ಯಾಯಾಲಯದ ಸಿವಿಲ್ ಅಪೀಲ್ ಸಂಖ್ಯೆ: 2368/2011 ಮತ್ತು ಸಂಬಂಧಿಸಿದ ಇತರೆ ಸಿವಿಲ್ ಅಪೀಲುಗಳು ಶ್ರೀ ಬಿ.ಕೆ. ಪವಿತ್ರ ಮತ್ತು ಇತರರ ವಿರುದ್ಧ ಯೂನಿಯನ್ ಆಫ್ ಇಂಡಿಯಾ ಮತ್ತು ಇತರರು ಪ್ರಕರಣದಲ್ಲಿ ನೀಡಿರುವ ದಿನಾಂಕ 09-02-2017 ರ ತೀರ್ಪನ್ನು ಅನುಷ್ಠಾನಗೊಳಿಸಲು ಸಮಾಜ ಕಲ್ಯಾಣ ಇಲಾಖೆಯ ....ಸೀನಿಯರ್ ವಾರ್ಡನ್.... ಹುದ್ದೆಯ ಪರಿಷ್ಕೃತ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸುವ ಬಗ್ಗೆ

ಉಲ್ಲೇಖ:- 1) ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 182 ಸೇನೇನಿ 2011 ದಿನಾಂಕ 06-05-2017
2) ಸರ್ಕಾರದ ಪತ್ರ ಸಂಖ್ಯೆ: ಸಕಇ 217 ಪಕಸೇ 2017 ದಿನಾಂಕ 24-06-2017

**********

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖ (1) ರ ಆದೇಶದಲ್ಲಿ ಮಾನ್ಯ ಸರ್ವೋಚ್ಛ ನ್ಯಾಯಾಲಯದ ಸಿವಿಲ್ ಅಪೀಲ್ ಸಂಖ್ಯೆ: 2368/2011 ಮತ್ತು ಸಂಬಂಧಿಸಿದ ಇತರೆ ಸಿವಿಲ್ ಅಪೀಲುಗಳು ಶ್ರೀ ಬಿ.ಕೆ. ಪವಿತ್ರ ಮತ್ತು ಇತರರ ವಿರುದ್ಧ ಯೂನಿಯನ್ ಆಫ್ ಇಂಡಿಯಾ ಮತ್ತು ಇತರರು ಪ್ರಕರಣದಲ್ಲಿ ನೀಡಿರುವ ತೀರ್ಪು ದಿನಾಂಕ 09-02-2017 ರ ಆದೇಶವನ್ನು ಅನುಷ್ಠಾನಗೊಳಿಸುವ ಸಂಬಂಧ ಸರ್ಕಾರದ ಎಲ್ಲಾ ಇಲಾಖಾ ಮತ್ತು ಸಂಸ್ಥೆಗಳಿಗೆ ಸಂಬಂಧಿಸಿದಂತೆ ಜೇಷ್ಠತಾ ಪಟ್ಟಿಯನ್ನು ಮೂರು ತಿಂಗಳೊಳಗಾಗಿ ಪರಿಷ್ಕರಿಸಲು ಆದೇಶಿಸಲಾಗಿರುತ್ತದೆ.

ಉಲ್ಲೇಖ (2) ರ ಸರ್ಕಾರದ ಪತ್ರದಲ್ಲಿ ಸಮಾಜ ಕಲ್ಯಾಣ ಇಲಾಖೆಯಲ್ಲಿರುವ ಎಲ್ಲಾ ವೃಂದಗಳ ಪರಿಷ್ಕೃತ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಪ್ರಕಟಿಸಲು ವೃಂದವಾರು ಜೇಷ್ಠತಾ ಪಟ್ಟಿಯನ್ನು ಪರಿಷ್ಕರಿಸಿ, ಸರ್ಕಾರಕ್ಕೆ ಸಲ್ಲಿಸುವಂತೆ ನಿರ್ದೇಶನವಿರುತ್ತದೆ.

ಸಮಾಜ ಕಲ್ಯಾಣ ಇಲಾಖೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ....ಸೀನಿಯರ್ ವಾರ್ಡನ್.... ಹುದ್ದೆಯ ಪರಿಷ್ಕೃತ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಅನುಬಂಧದಲ್ಲಿ ಸಿದ್ದಪಡಿಸಿ ಇಲಾಖಾ ವೆಬ್‌ಸೈಟ್ www.sw.kar.nic.in ನಲ್ಲಿ ಪ್ರಕಟಿಸಿದೆ. ಈ ಪರಿಷ್ಕೃತ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಇ-ಮೇಲ್ ಮೂಲಕ ಎಲ್ಲಾ ಜಿಲ್ಲೆಗಳ ಜಂಟಿ / ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಯೋಜನಾ ಸಮನ್ವಯಾಧಿಕಾರಿಗಳು, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ಹಾಗೂ ಎಲ್ಲಾ ತಾಲ್ಲೂಕುಗಳ ಸಹಾಯಕ ನಿರ್ದೇಶಕರು, ಗ್ರೇಡ್-1 & 2, ಸಮಾಜ ಕಲ್ಯಾಣ ಇಲಾಖೆ ರವರುಗಳಿಗೆ ಕಳುಹಿಸಲಾಗಿದೆ.

ಸಂಬಂಧಿಸಿದ ಅಧಿಕಾರಿಗಳು ಇಲಾಖಾ ವೆಬ್‌ಸೈಟ್‌ನಿಂದ ತಾತ್ಕಾಲಿಕ ಜೇಷ್ಠತಾ ಪಟ್ಟಿಯನ್ನು ಡೌನ್‌ಲೋಡ್ ಮಾಡಿಕೊಂಡು, ಪ್ರತಿಗಳನ್ನು ಮಾಡಿಸಿ ದಿನಾಂಕ 6-12-17 ರ ಒಳಗಾಗಿ ತಮ್ಮ ಅಧೀನದಲ್ಲಿ ಬರುವ ಸಂಬಂಧಿಸಿದ ಎಲ್ಲಾ ನೌಕರರಿಗೆ ಜಾರಿ ಮಾಡುವುದು. ತದನಂತರ ಸಂಬಂಧಿಸಿದ ಅಧಿಕಾರಿಗಳು ಈ ಕುರಿತು ನೌಕರರಿಂದ ಸ್ವೀಕರಿಸಿದ ಆಕ್ಷೇಪಣೆಗಳನ್ನು ನೌಕರರ ಸೇವಾ ವಹಿಯೊಂದಿಗೆ ಪರಿಶೀಲಿಸಿ ನ್ಯೂನತೆ / ಆಕ್ಷೇಪಣೆಗಳ ಬಗ್ಗೆ ಷರಾ ನಮೂದಿಸಿ ಆಕ್ಷೇಪಣೆಗಳನ್ನು ಲಗತ್ತಿಸಲಾಗಿರುವ ಅನುಬಂಧದಲ್ಲಿರುವಂತೆ ಪಟ್ಟಿ ಮಾಡಿ ಹಾಗೂ ನಿವೃತ್ತಿ ಹೊಂದಿದವರು, ಮರಣ ಹೊಂದಿದವರು, ಇಲಾಖೆ ಬಿಟ್ಟಿರುವವರು ಇತ್ಯಾದಿ ವಿವರಗಳನ್ನು ನಮೂದಿಸತಕ್ಕದ್ದು.

ಡಾ॥ ಬಿ.ಆರ್. ಅಂಬೇಡ್ಕರ್ ಸಂಶೋಧನಾ ಸಂಸ್ಥೆ, ಕರ್ನಾಟಕ ರಾಜ್ಯ ಅನುಸೂಚಿತ ಜಾತಿ / ಬುಡಕಟ್ಟುಗಳ ಆಯೋಗ, ಪರೀಕ್ಷಾ ಪೂರ್ವ ತರಬೇತಿ ಕೇಂದ್ರ, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, ಎಲ್ಲಾ ಜಿಲ್ಲೆಗಳ ಜಂಟಿ / ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ, ಯೋಜನಾ ಸಮನ್ವಯಾಧಿಕಾರಿಗಳು, ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ಸ್ವೀಕರಿಸಿದ ಆಕ್ಷೇಪಣೆಗಳನ್ನು ಕ್ರೋಢೀಕರಿಸಿ, ದೃಢೀಕರಣದೊಂದಿಗೆ ದಿನಾಂಕ 20-12-17 ರೊಳಗೆ ಈ ಕಛೇರಿಗೆ ಮುದ್ದಾಂ ಸಲ್ಲಿಸಲು ಸೂಚಿಸಿದೆ. ನಿಗದಿತ ದಿನಾಂಕದ ನಂತರ ಸ್ವೀಕೃತಗೊಳ್ಳುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

30.XI.17

ಆಯುಕ್ತರು,
ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.

<u>ಪ್ರತಿಯನ್ನು:-</u>

1) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು, ಸಮಾಜ ಕಲ್ಯಾಣ ಇಲಾಖೆ, ಬೆಂಗಳೂರು.
2) ನಿರ್ದೇಶಕರು, ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
3) ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳಿಗೆ.
4) ನಿರ್ದೇಶಕರು, ಡಾ॥ ಬಿ.ಆರ್. ಅಂಬೇಡ್ಕರ್ ಸಂಶೋಧನಾ ಸಂಸ್ಥೆ, ಬೆಂಗಳೂರು.
5) ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಅನುಸೂಚಿತ ಜಾತಿ / ಬುಡಕಟ್ಟುಗಳ ಆಯೋಗ, ಬೆಂಗಳೂರು.
6) ಪ್ರಾಂಶುಪಾಲರು, ಪರೀಕ್ಷಾ ಪೂರ್ವ ತರಬೇತಿ ಕೇಂದ್ರ, ಬೆಂಗಳೂರು.
7) ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಸಫಾಯಿ ಕರ್ಮಚಾರಿಗಳ ಆಯೋಗ, ಬೆಂಗಳೂರು.
8) ಎಲ್ಲಾ ಜಿಲ್ಲೆಗಳ ಜಂಟಿ / ಉಪ ನಿರ್ದೇಶಕರು, ಸಮಾಜ ಕಲ್ಯಾಣ ಇಲಾಖೆ.
9) ಎಲ್ಲಾ ಯೋಜನಾ ಸಮನ್ವಯಾಧಿಕಾರಿಗಳು, ಸಮಗ್ರ ಗಿರಿಜನ ಅಭಿವೃದ್ಧಿ ಯೋಜನೆ.
10) ಎಲ್ಲಾ ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳಿಗೆ.
11) ಎಲ್ಲಾ ಸಹಾಯಕ ನಿರ್ದೇಶಕರು, ಗ್ರೇಡ್-1 & 2, ಸಮಾಜ ಕಲ್ಯಾಣ ಇಲಾಖೆ.
12) ಸಂಬಂಧಿಸಿದ ನೌಕರರಿಗೆ ಜಿಲ್ಲಾ / ತಾಲ್ಲೂಕು ಮಟ್ಟದ ಅಧಿಕಾರಿಗಳ ಮುಖಾಂತರ.
13) ಕಛೇರಿ ಪ್ರತಿ / ಇತರೆ.